# ಎನ್‌ಐಟಿಕೆಗೆ ಕೆ.ಅಜಿತ್ ಕುಮಾರ್ ರೈ ನೇಮಕ

**ಮಂಗಳೂರು:** ಎನ್‌ಐಟಿಕೆ ಸುರತ್ಕಲ್ ಆಡಳಿತ ಮಂಡಳಿಗೆ ಉದ್ಯಮಿ ಕೆ.ಅಜಿತ್ ಕುಮಾರ್ ರೈ ರಾಜ್ಯ ಸರ್ಕಾರದ ಪ್ರತಿನಿಧಿಯಾಗಿ ನಾಮನಿರ್ದೇಶನಗೊಂಡಿದ್ದಾರೆ.



ಮೈಸೂರು ವಿವಿಯಲ್ಲಿ ಮೆಕಾನಿಕಲ್ ಇಂಜಿನಿಯರಿಂಗ್ ಪದವಿ ಹಾಗೂ ಕೆನಡಾದ ಡಾಲ್‌ಹೌಸಿ ವಿಶ್ವವಿದ್ಯಾಲಯದಲ್ಲಿ ಕೈಗಾರಿಕಾ ಇಂಜಿನಿಯರಿಂಗ್‌ನಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ಅವರು ಸುಪ್ರಜಿತ್ ಗ್ರೂಪ್ ಆಫ್ ಕಂಪನಿಯ ಸಂಸ್ಥಾಪಕರು. ಕೈಗಾರಿಕಾ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಅವರು ಮುಂಬೈನ ಇಂಡಿಯನ್ ಇನ್‌ಸ್ಟಿಟ್ಯೂಟ್ ಮ್ಯಾನೇಜ್‌ಮೆಂಟ್, ಅಮೆರಿಕನ್ ಇನ್‌ಸ್ಟಿಟ್ಯೂಟ್ ಆಫ್ ಇಂಡಸ್ಟ್ರಿಯಲ್ ಇಂಜಿನಿಯರ್ಸ್ ಮುಂತಾದ ಕೈಗಾರಿಕಾ ಸಂಸ್ಥೆಗಳ ಆಡಳಿತ ಮಂಡಳಿ ಸದಸ್ಯ.

Vijayavani, Date:09/11/23, p, no - 05